**ಕರ್ನಾಟಕ ಸರ್ಕಾರ**

ಸಂ: ಡಿಟಿಇ/491/ಎಸಿಎಂ(2)/2017-18

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ:05-02-2018.

**-:: ಸು ತ್ತೋ ಲೆ ::-**

**ವಿಷಯ:** 2017-18ನೇ ಸಾಲಿನ 03, ಮತ್ತು 05ನೇ ಸೆಮಿಸ್ಟರ್ ತರಗತಿಗಳಿಗೆ **ಸಂಜೆ** ಪಾಲಿಟೆಕ್ನಿಕ್‌ಗಳಲ್ಲಿ ಪ್ರವೇಶ ಪಡೆಯಲು ಅಂತಿಮ ದಿನಾಂಕ ನಿಗಧಿಪಡಿಸುವ ಕುರಿತು. (ಸರ್ಕಾರಿ ಮತ್ತು ಅನುದಾನಿತ).

**ಉಲ್ಲೇಖ:**
1. ಈ ಕಛೇರಿಯ ಪ್ರವೇಶಾಧಿಸೂಚನೆ ಸಂ: ಡಿಟಿಇ/427/ಎಸಿಎಂ(2)/2016-17, ದಿನಾಂಕ: 16-05-2017.
2. ಸರ್ಕಾರಿ ಆದೇಶ ಸಂ.ಇಡಿ 119 ಡಿಟಿಇ 2005, ದಿ:16-10-2005 & ಇಡಿ 10 ಟಿಪಿಇ 2012, ದಿ:20-05-2012

-0000000-

2017-18ನೇ ಸಾಲಿನಲ್ಲಿ 03, ಮತ್ತು 05ನೇ ಸೆಮಿಸ್ಟರ್ ತರಗತಿಗಳಿಗೆ **ಸಂಜೆ** ಪಾಲಿಟೆಕ್ನಿಕ್‌ಗಳಲ್ಲಿ ಪ್ರವೇಶ ಪಡೆಯುವ ಸಂಬಂಧ ನಿಯಮಗಳ ಪ್ರಕಾರ ಅರ್ಹ ಅಭ್ಯರ್ಥಿಗಳಿಗೆ ಪ್ರವೇಶ ನೀಡಲು ಕೆಳಕಂಡಂತೆ ಅಂತಿಮ ದಿನಾಂಕ ನಿಗಧಿಪಡಿಸಲಾಗಿದೆ.

1. ದಿನಾಂಕ:10-02-2018ರವರೆಗೆ ಯಾವುದೇ ದಂಡ ಶುಲ್ಕವಿಲ್ಲದೆ ಅರ್ಹ ಶುಲ್ಕವನ್ನು ಮಾತ್ರ ಪಡೆದು ಪ್ರವೇಶ ನೀಡುವುದು.
2. ದಿನಾಂಕ:15-02-2018ರವರೆಗೆ ₹ 200/-ರ ದಂಡ ಶುಲ್ಕದೊಂದಿಗೆ ಅರ್ಹ ಶುಲ್ಕವನ್ನು ಪಾವತಿಸಿಕೊಂಡು ಪ್ರವೇಶ ನೀಡುವುದು.
3. ದಿನಾಂಕ:20-02-2018ರವರೆಗೆ ₹ 400/-ರ ದಂಡ ಶುಲ್ಕದೊಂದಿಗೆ ಅರ್ಹ ಶುಲ್ಕವನ್ನು ಪಾವತಿಸಿಕೊಂಡು ಪ್ರವೇಶ ನೀಡುವುದು.
4. ಅಂತಿಮವಾಗಿ ದಿ:24-02-2018ರವರೆಗೆ ₹ 1000/- ದಂಡ ಶುಲ್ಕದೊಂದಿಗೆ ಅರ್ಹ ಶುಲ್ಕವನ್ನು ಪಾವತಿಸಿಕೊಂಡು ಪ್ರವೇಶ ನೀಡುವುದು.

**ಮರುಪ್ರವೇಶ** :- 03 ಮತ್ತು 05ನೇ ಸೆಮಿಸ್ಟರ್ ತರಗತಿಗಳಿಗೆ ನಿಯಮಗಳ ಪ್ರಕಾರ ಅರ್ಹ ಅಭ್ಯರ್ಥಿಗಳಿಗೆ ಮರುಪ್ರವೇಶ ನೀಡುವಲ್ಲಿ ಅಂತಿಮ **ದಿ:10-02-2018**.

03 ಮತ್ತು 05ನೇ ಸೆಮಿಸ್ಟರ್ ತರಗತಿಗಳಿಗೆ ನಿಯಮಗಳ ಪ್ರಕಾರ ಅರ್ಹ ಅಭ್ಯರ್ಥಿಗಳಿಗೆ ಪ್ರವೇಶ ನೀಡಲು ಈ ಕೆಳಂಡ ಅಂಶಗಳನ್ನು ಪರಿಗಣಿಸಿ ಪ್ರವೇಶ ನೀಡತಕ್ಕದ್ದು.

- ಹಿಂದಿನ ಸೆಮಿಸ್ಟರ್‌ನಲ್ಲಿ ಹಾಜರಾತಿ ಕಡಿಮೆ ಇದ್ದಲ್ಲಿ ಅಂತಹ ವಿದ್ಯಾರ್ಥಿಗಳು ಪ್ರವೇಶಕ್ಕೆ ಅರ್ಹರಿರುವುದಿಲ್ಲ.
- ಪರೀಕ್ಷಾ ದುರಾಚಾರ (Suspected Malpractice) ಎಸಗಿದ್ದಲ್ಲಿ ಅಂತಹ ವಿದ್ಯಾರ್ಥಿಗಳಿಗೆ ತಾಂತ್ರಿಕ ಪರೀಕ್ಷಾ ಮಂಡಳಿಯಿಂದ ಅನುಮತಿ ಪಡೆಯದೇ ಪ್ರವೇಶ ನೀಡತಕ್ಕದ್ದಲ್ಲ.
- ಪ್ರವೇಶಾನುಮೋದನೆಯಾಗದೇ ತಡೆಹಿಡಿದಿದ್ದಲ್ಲಿ ಅಂತಹ ವಿದ್ಯಾರ್ಥಿಗಳು ಪ್ರವೇಶಕ್ಕೆ ಅರ್ಹರಿರುವುದಿಲ್ಲ.

Scanned by CamScanner

- 03 ಮತ್ತು 05ನೇ ಸೆಮಿಸ್ಟರ್‌ಗೆ ಪ್ರವೇಶ ಬಯಸುವ ವಿದ್ಯಾರ್ಥಿಗಳು ನಿಯಮಗಳ ಪ್ರಕಾರ ಅರ್ಹತೆ ಹೊಂದಿರುವುದನ್ನು ಖಚಿತಪಡಿಸಿಕೊಂಡು ಪ್ರವೇಶ ನೀಡತಕ್ಕದ್ದು. 01 ರಿಂದ 04ನೇ ಸೆಮಿಸ್ಟರ್ ಪರಿಕ್ಷೆಗಳಲ್ಲಿ 04 ವಿಷಯಗಳಿಗಿಂತ ಹೆಚ್ಚಿನ ವಿಷಯಗಳಲ್ಲಿ ಅನುತ್ತೀರ್ಣಗೊಂಡಿದಲ್ಲಿ ಅಂತಹ ವಿದ್ಯಾರ್ಥಿಗಳು 03 & 05ನೇ ಸೆಮಿಸ್ಟರ್ ಪ್ರವೇಶ ಪಡೆಯಲು ಅರ್ಹರಿರುವುದಿಲ್ಲ.

ಮೇಲ್ಕಂಡ ಅಂಶಗಳನ್ನು ಪ್ರಿನ್ಸಿಪಾಲರು ಕಟ್ಟುನಿಟ್ಟಾಗಿ ಪಾಲಿಸಿತಕ್ಕದ್ದು. ಹಾಗೂ ಮೇಲಿನ ಎಲ್ಲಾ ಅಂಶಗಳನ್ನು ಗಮನದಲ್ಲಿರಿಸಿಕೊಂಡು ಅರ್ಹ ವಿದ್ಯಾರ್ಥಿಗಳಿಗೆ ಪ್ರವೇಶ ನೀಡುವಲ್ಲಿ ಸೂಕ್ತ ಕ್ರಮ ತೆಗೆದುಕೊಳ್ಳುವುದು ಹಾಗೂ ಪ್ರವೇಶ ಕೋರಿ ತಡವಾಗಿ ಸಲ್ಲಿಸುವ ಮನವಿಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ವಿದ್ಯಾರ್ಥಿಗಳಿಗೆ ಸಾಕಷ್ಟು ತಿಳುವಳಿಕೆ ನೀಡುವ ಬಗ್ಗೆ ಅಗತ್ಯ ಕ್ರಮ ತೆಗೆದುಕೊಳ್ಳುವುದು. ಈ ನಿಟ್ಟಿನಲ್ಲಿ ಯಾವುದೇ ಮನವಿಗಳನ್ನು ನಿರ್ದೇಶನಾಲಯಕ್ಕೆ ಕಳುಹಿಸದೆ ನಿಯಮಗಳ ಪ್ರಕಾರ ಪ್ರಿನ್ಸಿಪಾಲರ ಹಂತದಲ್ಲೇ ಇತ್ಯರ್ಥಗೊಳಿಸಬೇಕೆಂದು ತಿಳಿಸಲಾಗಿದೆ.

ನಿರ್ದೇಶಕರು

*ಇವರಿಗೆ,*

ಪ್ರಿನ್ಸಿಪಾಲರು, ಸರ್ಕಾರಿ ಎಸ್.ಜೆ (ಸಂಜೆ) ಪಾಲಿಟೆಕ್ನಿಕ್, ಬೆಂಗಳೂರು
ಪ್ರಿನ್ಸಿಪಾಲರು, ಎಂ.ಇ.ಐ (ಸಂಜೆ) ಪಾಲಿಟೆಕ್ನಿಕ್, ಬೆಂಗಳೂರು

<u>ಪ್ರತಿ ಮಾಹಿತಿಗಾಗಿ:</u>

1. ಜಂಟಿ ನಿರ್ದೇಶಕರು (ಪರೀಕ್ಷೆ), ತಾಂತ್ರಿಕ ಶಿಕ್ಷಣ ಪರೀಕ್ಷಾ ಮಂಡಳಿ. ಬೆಂಗಳೂರು
2. ಆಡಳಿತಾಧಿಕಾರಿಯವರು, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು
3. ನಿರ್ದೇಶಕರ ಆಪ್ತಶಾಖೆಗೆ
4. ಸಾರ್ವಜನಿಕ ಸಂಪರ್ಕಾಧಿಕಾರಿ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ
5. ರಿಜಿಸ್ಟ್ರಾರ್(ಪರೀಕ್ಷೆ) ಮತ್ತು ಆರ್‌ಡಿಎಂ(1) ರಿಂದ (15) ರವರೆಗೆ
6. ಸಂಯೋಜನಾಧಿಕಾರಿಗಳು, ತಾಂತ್ರಿಕ ಶಿಕ್ಷಣ ನಿರ್ದೇಶನಲಾಯ – ಸದರಿ ಸುತ್ತೋಲೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.

Scanned by CamScanner